# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1416** |
| ಸದಸ್ಯರ ಹೆಸರು | : | ಶ್ರೀ ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 16-03-2026 |
| ಉತ್ತರಿಸುವ ಸಚಿವರು | | ಮಾನ್ಯ ಇಂಧನ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿನ ಅನೇಕ ಸರ್ಕಾರಿ ಹಾಗೂ ಖಾಸಗಿ ಶಾಲಾ ಆವರಣಗಳಲ್ಲಿ ವಿದ್ಯುತ್ ಕಂಬ, ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳಿದ್ದು, ಶಾಲಾ ಆವರಣಗಳಲ್ಲಿ ವಿದ್ಯುತ್ ತಂತಿಗಳು ಕೂಡಾ ಹಾದು ಹೋಗಿರುತ್ತದೆ. ಕೊಪ್ಪಳ, ತುಮಕೂರು, ಹಾವೇರಿ ಜಿಲ್ಲೆಗಳಲ್ಲಿ ವಿದ್ಯುತ್ ದುರ್ಘಟನೆಯಿಂದ ವಿದ್ಯಾರ್ಥಿಗಳು ಗಾಯಗೊಂಡಿದ್ದು, ಸಾವನ್ನಪ್ಪಿರುವುದು ಪತ್ರಿಕೆಗಳಲ್ಲಿ ವರದಿಯಾಗಿವೆ: ಬಾಗಲಕೋಟೆ ಜಿಲ್ಲೆಯ ಬಾಗಲಕೋಟೆ ನಗರದ ಬಿಟಿಡಿಎ ವ್ಯಾಪ್ತಿಯಲ್ಲಿನ ಯೂನಿಟ್-2ರಲ್ಲಿ ಸುಮಾರು 15 ಎಕರೆ ವ್ಯಾಪ್ತಿಯಲ್ಲಿರುವ ಪಿಎಂ ಕೇಂದ್ರೀಯ ವಿದ್ಯಾಲಯದಲ್ಲಿ 463 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದು, ಸದರಿ ಶಾಲೆ ಆವರಣದಲ್ಲಿ ಶಿಕ್ಷಕರ ವಸತಿ ಗೃಹಗಳಿದ್ದು ಸುಮಾರು 30 ಶಿಕ್ಷಕರು ವಾಸಿಸುತ್ತಿರುತ್ತಾರೆ. ಇಂತಹ ಶಾಲಾ ಆವರಣದಲ್ಲಿ 110 ಕೆ.ವಿ. ಹೈಟೆನ್ಶನ್ ವಿದ್ಯುತ್ ತಂತಿಯು ಹಾದು ಹೋಗಿದ್ದು, ಶಾಲೆಯಲ್ಲಿನ ವಿದ್ಯಾರ್ಥಿಗಳು, ಪೋಷಕರು ಹಾಗೂ ಶಾಲಾ ಸಿಬ್ಬಂದಿ ವರ್ಗವು ಜೀವಭಯದಲ್ಲಿದ್ದು, ವಿದ್ಯುತ್ ತಂತಿಗಳು ಹಾಯ್ದು ಹೋದ ಕಾರಣಕ್ಕಾಗಿಯೇ ಶಾಲೆಗೆ ಸಂಬಂಧಿಸಿದಂತೆ ಯಾವುದೇ ಹೊಸ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳದಂತಾಗಿದೆ. ಕಳೆದ 9 ವರ್ಷಗಳಿಂದ ಸಮಸ್ಯೆ ಇದ್ದರೂ, ಪರಿಹರಿಸಲು ಅನೇಕ ಸಾರಿ ಸಂಬಂಧಿಸಿದವರಿಗೆ ದೂರಗಳನ್ನು ಸಲ್ಲಿಸಿದರೂ, ಸರ್ಕಾರದ ಆದೇಶ ಸಂಖ್ಯೆ ಕೆಪಿಟಿಸಿಎಲ್ ಬಾಗಲಕೋಟೆ ಇವರ ಪತ್ರ ಸಂಖ್ಯೆ CEE/BGKT/TRNS/SEE(O)/AEE-5/24-25/ F-11A&B/26405-09: ದಿನಾಂಕ: 24.03.2025 ರಂದು ಹೊರಡಿಸಿದ್ದರೂ ಕೂಡಾ ಈವರೆಗೆ ಸಂಬಂಧಪಟ್ಟವರು ಯಾವುದೇ ಕ್ರಮಕೈಗೊಳ್ಳದೇ ಇರುವ ಗಂಭೀರ ಸಮಸ್ಯೆಯು ಸರಕಾರದ ಗಮನಕ್ಕೆ ಬಂದಿದೆಯೇ: | ಕವಿಪ್ರನಿನಿ ವ್ಯಾಪ್ತಿಯ ಬಾಗಲಕೋಟೆ ಕಾರ್ಯಾಚರಣೆ ವಲಯದ 110ಕೆ.ವಿ ಬಾಗೇವಾಡಿ-ಬಾಗಲಕೋಟೆ ವಿದ್ಯುತ್ ಮಾರ್ಗವನ್ನು ಸ್ಥಳಾಂತರಿಸಲು ಬಿ.ಟಿ.ಡಿ.ಎ, ನವನಗರ, ಬಾಗಲಕೋಟೆ ರವರು ಸ್ವಯಂ ಕಾಮಗಾರಿ ಯೋಜನೆಯಡಿಯಲ್ಲಿ ಪ್ರಸರಣ ಮಾರ್ಗವನ್ನು ಸ್ಥಳಾಂತರಿಸುವ ಕಾಮಗಾರಿಯನ್ನು ಕಾರ್ಯಗತಗೊಳಿಸುತ್ತಿದ್ದಾರೆ.<br><br>ಕಾಮಗಾರಿಯು ಪ್ರಗತಿಯಲ್ಲಿದ್ದು, ಕೆಲವೊಂದು ಸ್ಥಳಗಳಲ್ಲಿ ರೈತರು ವಿದ್ಯುತ್ ಗೋಪುರಗಳನ್ನು ಅಳವಡಿಸಲು ಅಡ್ಡಿಪಡಿಸುತ್ತಿರುವುದರಿಂದ ಕಾಮಗಾರಿಯು ವಿಳಂಬವಾಗಿರುತ್ತದೆ. |
| ಆ) | ಬಂದಿದ್ದರೆ, ಸದರಿ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು: ಯಾವ ಕಾಲಮಿತಿಯಲ್ಲಿ ಈ ಎಲ್ಲಾ ಸಮಸ್ಯೆಯನ್ನು ಪರಿಹರಿಸಿ, ವಿದ್ಯಾರ್ಥಿಗಳು ಮತ್ತು ಪಾಲಕರು: ಶಿಕ್ಷಕರ ಆತಂಕ ದೂರ ಮಾಡಲು ಕ್ರಮ ವಹಿಸಲಾಗುವುದು.? | |

ಸಂಖ್ಯೆ: ಎನರ್ಜಿ 74 ಇಬಿಎಸ್ 2026

(ಕೆ.ಜೆ.ಜಾರ್ಜ್)
ಇಂಧನ ಸಚಿವರು